## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಚಿದಾನಂದ್ ಎಂ. ಗೌಡ ಮತ್ತು ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ರವರುಗಳ ಶೂನ್ಯ ವೇಳೆಗೆ ಉತ್ತರಿಸುವ ಕುರಿತು.

**ಸೂಚನೆ:**

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಚಿದಾನಂದ್ ಎಂ. ಗೌಡ ರವರ ಪ್ರಸ್ತಾವನೆ.**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ (ಕ್ರೈಸ್) ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿ ದಾಖಲಾತಿಗೆ ರಾಜ್ಯ ಸರ್ಕಾರವು ರೂಪಿಸಿರುವ ಶೇ.50-50 ನಿಯಮದಿಂದಾಗಿ ಅರ್ಹ ಮಕ್ಕಳಿಗೆ ಸೀಟು ಸಿಗುತ್ತಿಲ್ಲ. ಹೊಸ ನಿಯಮದ ಪ್ರಕಾರ ಶೇ 50% ಸೀಟುಗಳು ವಿವಿಧ ವರ್ಗಗಳ ಮಕ್ಕಳಿಗೆ ಪರೀಕ್ಷೆಯ ಮೂಲಕ ಭರ್ತಿ ಮಾಡಲಾಗುವುದು. ಉಳಿದ 50% ಸೀಟುಗಳನ್ನು ವಿಶೇಷ ವರ್ಗಗಳ ಮೀಸಲಾತಿ ಅಡಿ ಬರುವ ಮಕ್ಕಳಿಗೆ ನೇರ ದಾಖಲಾತಿ ಮೂಲಕ ಭರ್ತಿ ಮಾಡಲು ಮೀಸಲಾತಿ ನಿಯಮ ಜಾರಿಗೊಳಿಸಿದೆ. ಈಗಾಗಲೇ ಶಾಲೆ ಪ್ರಾರಂಭವಾಗಿ ಒಂದೂವರೆ ತಿಂಗಳು ಕಳೆದಿದ್ದು, ಈಗಲೂ ವಿವಿಧ ವರ್ಗದಡಿ 2,907 ಸೀಟು ಹಾಗೂ ವಿಶೇಷ ವರ್ಗದ 11,686 ಸೀಟು ಉಳಿಕೆಯಿವೆ. ಆದ್ದರಿಂದ ಸರ್ಕಾರ ದಾಖಲಾತಿಗೆ ಕಾಲಮಿತಿ ನಿಗದಿ ಮಾಡಿ, ಕಾಲಮಿತಿ ಮುಗಿದ ನಂತರ ಉಳಿದ ಸೀಟುಗಳನ್ನು ಮೆರಿಟ್ ಪಡೆದ ವಿದ್ಯಾರ್ಥಿಗಳಿಗೆ ನೀಡಬೇಕು. ಸರ್ಕಾರ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಟ್ಟಂತೆ ಆಗುತ್ತದೆ. ಯಾರೂ ದಾಖಲಾಗದೆ ಸೀಟು ಖಾಲಿ ಉಳಿದು ವ್ಯರ್ಥವಾಗುವುದನ್ನು ಸರ್ಕಾರ ತಡೆಯಬೇಕು. ಶಿಕ್ಷಣದ ಮಹತ್ವದ ಬಗ್ಗೆ ಸಂಕ್ಷಿಪ್ತವಾಗಿ ಹೇಳುವುದಾದರೆ.

"ನೀವು ಒಂದು ವರ್ಷಕ್ಕೆ ಯೋಚಿಸುತ್ತಿದ್ದರೆ, ಭತ್ತವನ್ನು ಬಿತ್ತಿರಿ, ನೀವು ಒಂದು ದಶಕಕ್ಕೆ ಯೋಜಿಸುತ್ತಿದ್ದರೆ, ಮರಗಳನ್ನು ನೆಡಿರಿ: ನೀವು ಒಂದು ಜೀವಿತಾವಧಿಗೆ ಯೋಜಿಸುತ್ತಿದ್ದರೆ, ಜನರಿಗೆ ಶಿಕ್ಷಣ ನೀಡಿ".

ಎನ್ನುವ ಮಾತಿನಂತೆ ನಾಡಿನ ನಾಳೆಯ ಅಭಿವೃದ್ಧಿಗಾಗಿ ಸರ್ಕಾರ ಯೋಚಿಸುತ್ತಿದ್ದರೆ, ಇಂದು ಅರ್ಹ ಪ್ರತಿಭಾವಂತ ಮಕ್ಕಳಿಗೆ ಲಭ್ಯವಿರುವ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶಿಕ್ಷಣವನ್ನು ನೀಡಬೇಕೆಂದು ಸರ್ಕಾರವನ್ನು ಆಗ್ರಹಿಸುತ್ತೇನೆ.

ಈ ವಿಷಯದ ಕುರಿತು ವಿಜಯವಾಣಿ ದಿನ ಪತ್ರಿಕೆಯಲ್ಲಿ ಪ್ರಕಟವಾದ ವರದಿಯ ನಕಲನ್ನು ಲಗತ್ತಿಸಿರುತ್ತೇನೆ. ಈ ಸಾರ್ವಜನಿಕ ಮಹತ್ವದ ವಿಷಯವನ್ನು ಸದನದ ಶೂನ್ಯವೇಳೆಯಲ್ಲಿ ಪ್ರಸ್ತಾಪಿಸುತ್ತೇನೆ.

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ರವರ ಪ್ರಸ್ತಾವನೆ.**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ (ಕ್ರೈಸ್) ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿ ದಾಖಲಾತಿಗೆ ರಾಜ್ಯ ಸರ್ಕಾರವು ರೂಪಿಸಿರುವ ಶೇ.50-50 ನಿಯಮದಿಂದಾಗಿ ಅರ್ಹ ಮಕ್ಕಳು ಸೀಟುಸಿಗದೆ ವಂಚಿತರಾಗುತ್ತಿದ್ದಾರೆ ಎಂದು ಪಾಲಕರು ಅಳಲು ತೋಡಿಕೊಳ್ಳುತ್ತಿದ್ದಾರೆ. ಒಂದೆಡೆ ಸರ್ಕಾರವು ರೂಪಿಸಿರುವ ಮಾನದಂಡಗಳ ಪ್ರಕಾರ ವಸತಿ ಶಾಲೆಗಳಿಗೆ ಮಕ್ಕಳು ದಾಖಲಾಗುತ್ತಿಲ್ಲ. ಮತ್ತೊಂದೆಡೆ ಅರ್ಹ ಮಕ್ಕಳಿಗೆ ಸೀಟು ಸಿಗುತ್ತಿಲ್ಲ ಇದರಿಂದ ಸಾವಿರಾರು ಸೀಟುಗಳು ಖಾಲಿ ಉಳಿಯುವಂತಾಗಿದೆ. ಈ ಹಿಂದೆ ರಾಜ್ಯ ಮಟ್ಟದಲ್ಲಿ ಪರೀಕ್ಷೆ ನಡೆಸಿ ಮೆರಿಟ್ ಪಟ್ಟಿ ಪ್ರಕಟಿಸಲಾಗುತ್ತಿತ್ತು. ಬಳಿಕ ಜಿಲ್ಲಾ ಮಟ್ಟದಲ್ಲಿ ಕೌನ್ಸಿಲಿಂಗ್ ನಡೆಸಿ ಶಾಲಾ ಆರಂಭದ ವೇಳೆಗೆ ದಾಖಲಾತಿ ಪೂರ್ಣಗೊಳ್ಳುತ್ತಿತ್ತು. ಆದರೆ ಪ್ರಸ್ತುತ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪರೀಕ್ಷೆ ನಡೆಸಿ ಜೂನ್ 3 ರಂದು ಮೊದಲ ಪಟ್ಟಿ, ಜೂನ್ 15ರಂದು 2ನೇ

ಪಟ್ಟಿಯನ್ನು ಪ್ರಕಟಿಸಿದ್ದು, 3ನೇ ಪಟ್ಟಿಯನ್ನು ಜುಲೈ 10ರಂದು ಪ್ರಕಟಿಸಿದೆ. ಆದರೆ ಈಗಾಗಲೇ ಶಾಲೆ ಆರಂಭವಾಗಿ ಒಂದೂವರೆ ತಿಂಗಳು ಕಳೆದಿದ್ದರೂ ಸಹ ಇನ್ನೂ ದಾಖಲಾತಿ ನಡೆಯುತ್ತಿದೆ. ದಾಖಲಾತಿ ಪ್ರಕ್ರಿಯೆ ನಡೆಸಲು ಸಮಯ ನಿಗದಿ ಮಾಡದಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಜೀವನಕ್ಕೆ ತೊಡಕುಂಟಾಗುತ್ತದೆ.

ರಾಜ್ಯದಲ್ಲಿ ಒಟ್ಟು 40,100 ಸೀಟುಗಳಲ್ಲಿ ವಿವಿಧ ವರ್ಗಗಳಿಗೆ ಮೀಸಲಿರುವ 20,555 ಸೀಟುಗಳಲ್ಲಿ 2ನೇ ಸುತ್ತಿನ ಸೀಟು ಹಂಚಿಕೆ ವೇಳೆಗೆ 17,648 ಸೀಟುಗಳು ಭರ್ತಿಯಾಗಿವೆ. ವಿಶೇಷ ವರ್ಗದ ವಿಭಾಗದಲ್ಲಿ 20,555 ಸೀಟುಗಳಲ್ಲಿ ಕೇವಲ 8,869 ವಿದ್ಯಾರ್ಥಿಗಳು ಮಾತ್ರ ದಾಖಲಾಗಿದ್ದು, 11,686 ಸೀಟುಗಳು ಬಾಕಿ ಉಳಿದುಕೊಂಡಿವೆ. ವಿವಿಧ ವರ್ಗಗಳ ಸೀಟುಗಳಿಗೆ 1,86,414 ಅರ್ಜಿಗಳು ಸಂದಾಯವಾಗಿದ್ದರೆ, ವಿಶೇಷ ವರ್ಗದ ಸೀಟುಗಳಿಗೆ ಬಂದ "ಅರ್ಜಿಗಳ ಸಂಖ್ಯೆ 18,081 ಮಾತ್ರ. ಹೀಗಾಗಿ ಸೀಟಿಗಾಗಿ ಕಾಯುತ್ತಿರುವ ಅರ್ಹ ಮಕ್ಕಳಿಗೆ ಭರ್ತಿಯಾಗದೆ ಉಳಿದಿರುವ ಸೀಟುಗಳನ್ನು ನೀಡುವಂತೆ ಪಾಲಕರು ಒತ್ತಾಯಿಸಿದ್ದಾರೆ.

ಮೆರಿಟ್ ಪಡೆದಿರುವ ಸಾವಿರಾರು ಮಕ್ಕಳು ವಸತಿ ಶಾಲೆಯಲ್ಲಿ ಪ್ರವೇಶ ದೊರೆಯುವ ನಂಬಿಕೆ ಮೇಲೆ ಇನ್ನೂ ಕಾಯುತ್ತಾ ಕುಳಿತಿದ್ದಾರೆ. ಕೆಲವರು ಮಕ್ಕಳನ್ನು ಖಾಸಗಿ ಶಾಲೆಗೆ ಸೇರಿಸಿ, ಸೀಟು ಸಿಗುವ ಭರವಸೆಯಲ್ಲಿಯೇ ಶುಲ್ಕವನ್ನು ಕಟ್ಟದೆ ಸುಮ್ಮನಿದ್ದಾರೆ. ಒಂದೆಡೆ ಸೀಟುಗಳು ಭರ್ತಿಯಾಗುತ್ತಿಲ್ಲ, ಮತ್ತೊಂದೆಡೆ ದಾಖಲಾತಿಯೂ ದೊರೆಯದೇ ಇರುವುದರಿಂದ ವಿದ್ಯಾರ್ಥಿಗಳು ಮತ್ತು ಪಾಲಕರು ಅತಂತ್ರ ಸ್ಥಿತಿಯಲ್ಲಿದ್ದಾರೆ ಮತ್ತು ಸರ್ಕಾರದ ನೂತನ ನಿಯಮವು ಬಡ ಮಕ್ಕಳ ಬದುಕಿಗೆ ಮಾರಕವಾಗಿದೆ. ಆದ್ದರಿಂದ ಸದರಿ ನಿಯಮವನ್ನು ಮತ್ತೊಮ್ಮೆ ಪರಿಶೀಲಿಸಿ ವಸತಿ ಶಾಲೆಗಳ ಪ್ರವೇಶಾತಿಗಾಗಿ ಕಾದು ಕುಳಿತಿರುವ ಬಡ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರವು ಕ್ರಮ ಕೈಗೊಳ್ಳಬೇಕೆಂದು ಸರ್ಕಾರವನ್ನು ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ.

**ಉತ್ತರ:**

ಕರ್ನಾಟಕ ಸರ್ಕಾರವು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೂಲಕ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಸತಿ ಸಹಿತ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಅಟಲ್ ಬಿಹಾರಿ ವಾಜಪೇಯಿ/ಶ್ರೀ ನಾರಾಯಣ ಗುರು ಇತ್ಯಾದಿ ಹೆಸರುಗಳಿಂದ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಈ ಎಲ್ಲಾ ವಸತಿ ಶಾಲೆಗಳಿಗೆ ಪ್ರಾರಂಭಿಕ ತರಗತಿಯಾದ 06 ನೇ ತರಗತಿಯ ಪ್ರವೇಶಾಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಆನ್‌ಲೈನ್ ಪರೀಕ್ಷೆ ನಡೆಸಿ, ಮೆರಿಟ್ ಆಧಾರದ ಮೇಲೆ ಮೀಸಲಾತಿಯನ್ನು ಪರಿಗಣಿಸಿ ಪ್ರವೇಶಾತಿ ನೀಡಲಾಗುತ್ತಿದೆ. 2024-25 ನೇ ಸಾಲಿಗೆ 6ನೇ ತರಗತಿಯ 41110 ಸೀಟುಗಳಿಗೆ ಪ್ರವೇಶ ಪರೀಕ್ಷೆ ನಡೆಸಿ, ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಸುಮಾರು 1.60 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳಿಂದ ಅರ್ಜಿಗಳು ಸ್ವೀಕೃತವಾಗಿರುತ್ತವೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ 19.06.2021 ರಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ತನ್ನ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿಯ ಪ್ರವೇಶಾತಿಗಾಗಿ ಪ್ರವೇಶ ಪರೀಕ್ಷೆ ಮತ್ತು ಸೀಟು ಹಂಚಿಕೆ ಕಾರ್ಯವನ್ನು ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ (CET Cell) ವಹಿಸಲಾಗಿದೆ. ಅದರಂತೆ 2024-25ನೇ ಸಾಲಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ರಾಜ್ಯಾದ್ಯಂತ ಏಕಕಾಲದಲ್ಲಿ ರಾಜ್ಯ ಮಟ್ಟದ ಪ್ರವೇಶ ಪರೀಕ್ಷೆಯನ್ನು ನಡೆಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂ.ಡಿ.ಎಸ್ 2022, ದಿನಾಂಕ: 15.03.2024 ರಲ್ಲಿ ವಿಶೇಷ ವರ್ಗಗಳಿಗೆ ಸೇರಿದ ಸಫಾಯಿ ಕರ್ಮಚಾರಿ/ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಚಿಂದಿ ಆಯುವವರು/ ಸ್ಮಶಾನ ಕಾರ್ಮಿಕರ ಮಕ್ಕಳಿಗೆ/ಬಾಲ ಕಾರ್ಮಿಕರು/ಜೀತ ವಿಮುಕ್ತ ಕಾರ್ಮಿಕರ ಮಕ್ಕಳು/ ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು/25% ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು/ ಹೆಚ್.ಐ.ವಿ ಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು/ಗುರುತಿಸಿರುವ ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ-ಅತೀ ಸೂಕ್ಷ್ಮ ಸಮುದಾಯದ/ ಸೈನಿಕರು ಮತ್ತು ಮಾಜಿ ಸೈನಿಕರು/ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು/ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5 ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳಿಗೆ ಶೇ. 50 ರಷ್ಟು ಸೀಟುಗಳಿಗೆ ನೇರ ಪ್ರವೇಶಾತಿ ಕಲ್ಪಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

6ನೇ ತರಗತಿ ಪ್ರವೇಶಾತಿಗೆ ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:12.11.2021 ರನ್ವಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಿ, ಆನ್‌ಲೈನ್ ಸೀಟು ಹಂಚಿಕೆಗೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಲಾಗುತ್ತದೆ.

1.ಅಭ್ಯರ್ಥಿಗಳು ಪ್ರವೇಶ ಪರೀಕ್ಷೆಯಲ್ಲಿ ಪಡೆದ ಅಂಕಗಳು (ಮೆರಿಟ್).

2.ಅಭ್ಯರ್ಥಿಗೆ ಅನ್ವಯವಾಗುವ ಮೀಸಲಾತಿ.

3.ಅಭ್ಯರ್ಥಿಯು ಸೇರ ಬಯಸುವ ವಸತಿ ಶಾಲೆಗಳ ಶಾಲಾವಾರು ಆಧ್ಯತೆ.

ಮೇಲ್ಕಂಡ ಅಂಶಗಳ ಆಧಾರದ ಮೇಲೆ seat matrix ಸಿದ್ಧಪಡಿಸಿ ಗಣಕೀಕೃತ ಸ್ವಯಂ ಆಯ್ಕೆ (Computerized auto selection) ಮೂಲಕ ಪಾರದರ್ಶಕವಾಗಿ ಸೀಟು ಹಂಚಿಕೆ ಮಾಡಿ ಪ್ರವೇಶಾವಕಾಶ ನೀಡಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ-ಎಂ.ಡಿ.ಎಸ್/78/2023(P-1), ದಿನಾಂಕ: 12.02.2024 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿಯಲ್ಲಿ ರಾಜ್ಯದ ಎಲ್ಲಾ ತಾಲ್ಲೂಕಿನ ಸ್ಥಳೀಯ

ಅಭ್ಯರ್ಥಿಗಳಿಗೆ ಶೇ.75 ರಷ್ಟು ಹಾಗೂ ಅದೇ ಜಿಲ್ಲೆಯ ಇತರೆ ತಾಲ್ಲೂಕಿನ ಅಭ್ಯರ್ಥಿಗಳಿಗೆ ಶೇ. 25 ರಷ್ಟು ಮೀಸಲಾತಿಯನ್ನು ಹಂಚಿಕ ಮಾಡಲು ಸ್ಥಳೀಯ ಅಭ್ಯರ್ಥಿಯ ಪ್ರಮಾಣ ಪತ್ರ ಪಡೆಯುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

2024-25ನೇ ಸಾಲಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಒಟ್ಟಾರೆಯಾಗಿ 41,110 ಸೀಟುಗಳು ಲಭ್ಯವಿದ್ದು, ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂ.ಡಿ.ಎಸ್ 2022, ದಿನಾಂಕ: 15.03.2024 ರಲ್ಲಿ ವಿಶೇಷ ವರ್ಗದ ಮಕ್ಕಳಿಗೆ ಶೇ. 50 ರಷ್ಟು ಸೀಟುಗಳಿಗೆ (20555 ಸೀಟುಗಳು) ನೇರ ಪ್ರವೇಶಾತಿ ಕಲ್ಪಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

ವಿಶೇಷ ವರ್ಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಸಮಾಜದ ಮುಖ್ಯ ವಾಹಿನಿಗೆ ತರುವ ಸದುದ್ದೇಶದಿಂದ ಮೀಸಲಾತಿಯನ್ನು ಕಲ್ಪಿಸಲಾಗಿದೆ. ಸದರಿ ವರ್ಗಗಳಿಗೆ ಈ ಕುರಿತು ಹೆಚ್ಚಿನ ಮಾಹಿತಿ ಇಲ್ಲದಿರುವುದರಿಂದ ವಿಶೇಷ ಆಂದೋಲನದ ಮೂಲಕ ಸಾಮಾಜಿಕ ಮಾಧ್ಯಮಗಳು, ಪತ್ರಿಕೆಗಳು ಹಾಗೂ ಎಲೆಕ್ಟ್ರಾನಿಕ್ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ನೀಡಿದ್ದಾಗ್ಯೂ ವಿಶೇಷ ವರ್ಗಕ್ಕೆ ಮೀಸಲಾದ ಸೀಟುಗಳು ಸಂಪೂರ್ಣವಾಗಿ ಭರ್ತಿಯಾಗಿರುವುದಿಲ್ಲ.

ಆದ್ದರಿಂದ, 6 ನೇ ತರಗತಿಗೆ ಸಾಮಾನ್ಯ ಮೀಸಲಾತಿಗೆ ಒಟ್ಟು 20555 ಸೀಟುಗಳನ್ನು ಮೀಸಲಿರಿಸಿದ್ದು, ಈ ಪೈಕಿ, 17963 ಸೀಟುಗಳಿಗೆ ವಿದ್ಯಾರ್ಥಿಗಳು ದಾಖಲಾತಿಯನ್ನು ಪಡೆದಿದ್ದು, 2592 ಸೀಟುಗಳು ಉಳಿಕೆಯಾಗಿರುತ್ತವೆ.

ವಿಶೇಷ ವರ್ಗಗಳಿಗೆ ಮೀಸಲಿಡಲಾದ ಒಟ್ಟು 20555 ಸೀಟುಗಳಲ್ಲಿ, ಒಟ್ಟಾರೆಯಾಗಿ 9357 ವಿದ್ಯಾರ್ಥಿಗಳು ನೇರ ಪ್ರವೇಶಾತಿಯನ್ನು ಪಡೆದಿದ್ದು, 11198 ಸೀಟುಗಳ ಉಳಿಕೆಯಾಗಿರುತ್ತದೆ.

ವಿಶೇಷ ವರ್ಗಗಳಿಗೆ ಮೀಸಲಾಗಿರುವ ಸೀಟುಗಳನ್ನು ಭರ್ತಿ ಮಾಡಲು ವ್ಯಾಪಕ ಪ್ರಚಾರ ಮಾಡಿ ಜುಲೈ-31 ರವರೆಗೆ ಅಂತಿಮ ದಿನಾಂಕ ನಿಗಧಿಪಡಿಸಿದ್ದು ಹಾಗೂ ವಿಶೇಷ ವರ್ಗ ಮತ್ತು ಸಾಮಾನ್ಯ ವರ್ಗದ ಎಲ್ಲಾ ಸೀಟುಗಳನ್ನು ಮೆರಿಟ್ ಆಧಾರದ ಮೇಲೆ ಮೀಸಲಾತಿ ಅನ್ವಯ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಆಗಸ್ಟ್-07 ರೊಳಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆ ಮಾಡಿ ಶೇಕಡ 100 ರಷ್ಟು ಸೀಟುಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

ಸಕಇ 185 ಎಂಡಿಎಸ್ 2024

(ಡಾ. ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.